ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 449
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
ಉತ್ತರಿಸುವ ದಿನಾಂಕ : 18-02-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಸ್ಥೆಯ ಅಧೀನದ ವಸತಿ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳೆಷ್ಟು;	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ವಸತಿ ಶಾಲೆಗಳಿಗೆ 797 ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿರುತ್ತವೆ. ಈ ಪೈಕಿ 307 ಹುದ್ದೆಗಳಲ್ಲಿ ಖಾಯಂ ಪ್ರಾಂಶುಪಾಲರು ಕಾರ್ಯ ನಿರ್ವಹಿಸುತ್ತಿದ್ದಾರೆ. ಉಳಿದ 490 ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುತ್ತವೆ.
ಆ)	ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳಲ್ಲಿ ವಸತಿ ಶಾಲಾ ಶಿಕ್ಷಕರುಗಳಿಗೆ ಯಾವ ನಿಯಮದಡಿಯಲ್ಲಿ ಪ್ರಭಾರದಲ್ಲಿರಸಲಾಗಿದೆ; (ಮಾಹಿತಿ ಒದಗಿಸುವುದು)	ಆದೇಶ ಸಂಖ್ಯೆ: ಸಕಇ 425 ಮೊದೇಶಾ 2018 ದಿನಾಂಕ: 31.07.2018 ರಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳಿಗೆ ಜೇಷ್ಠತೆಯ ಆಧಾರದ ಮೇಲೆ ತಾತ್ಕಾಲಿಕವಾಗಿ ನಿಯೋಜನೆ ಮಾಡಲು ಆದೇಶಿಸಿರುವಂತೆ ಹಾಗೂ 490 ಪ್ರಾಂಶುಪಾಲರ ಹುದ್ದೆಗಳು ಖಾಲಿಯಿದ್ದು, ನೇಮಕಾತಿ ಪ್ರಕ್ರಿಯೆ ವಿಳಂಬವಾದ್ದರಿಂದ ಆಡಳಿತಾತ್ಮಕ ಹಿತದೃಷ್ಟಿಯಿಂದ ವಸತಿ ಶಾಲೆಗಳ ಶಿಕ್ಷಕರುಗಳನ್ನು ಸೇವಾ ಜೇಷ್ಠತೆಯ ಆಧಾರದ ಮೇಲೆ ಪ್ರಭಾರದಲ್ಲಿರಿಸಲಾಗಿರುತ್ತದೆ.
ಇ)	ಪ್ರಭಾರದಲ್ಲಿರಿಸಿದ ಸಿಬ್ಬಂದಿಗಳಿಗೆ ಇದುವರೆಗೂ ಮಂಜೂರು ಮಾಡಲಾದ ಪ್ರಭಾರ ಭತ್ಯೆಯನ್ನು ನೀಡಲಾಗಿದೆಯೇ; (ವಿವರ ನೀಡುವುದು) ಇಲ್ಲವಾದಲ್ಲಿ, ಪ್ರಭಾರ ಭತ್ಯೆವನ್ನು ನೀಡದಿರಲು ಕಾರಣಗಳೇನು;	ಕಾರ್ಯನಿರ್ವಹಿಸುತ್ತಿರುವ ಹುದ್ದೆಯ ಜೊತೆಯಲ್ಲಿ ಹೆಚ್ಚುವರಿಯಾಗಿ ಪ್ರಾಂಶುಪಾಲರ ಹುದ್ದೆಗೆ ಪ್ರಭಾರದಲ್ಲಿರಿಸಿದಾಗ ಪ್ರಭಾರ ನೀಡಬೇಕಾಗಿರುತ್ತದೆ. ಆದರೆ, ವಸತಿ ಶಾಲೆಗಳ ಶಿಕ್ಷಕರಿಗೆ ಹೆಚ್ಚುವರಿ ಪ್ರಭಾರವನ್ನು ವಹಿಸಿದಾಗ ಸದರಿ ಶಿಕ್ಷಕರು ತಾವು ಕಾರ್ಯನಿರ್ವಹಿಸುತ್ತಿರುವ ಹುದ್ದೆಗೆ ಎದುರಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡಿರುತ್ತಾರೆ. ಆದ್ದರಿಂದ ಸದರಿ ಶಿಕ್ಷಕರು ಪ್ರಭಾರ ಭತ್ಯೆಗೆ ಅರ್ಹರಿರುವುದಿಲ್ಲ.
ಈ)	ಸದರಿ ವಸತಿ ಶಾಲೆಗಳಿಗೆ ಪೂರ್ಣಕಾಲಿಕ ಪ್ರಾಂಶುಪಾಲರ ಅವಶ್ಯಕತೆ ಇಲ್ಲವೇ; ಅವಶ್ಯಕತೆ ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ನೇಮಕಾತಿಯಲ್ಲಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡುವುದು).	ಇದೆ. ಪ್ರಾಂಶುಪಾಲರ ಹುದ್ದೆಗೆ ಶೇ.75:25 (ಮುಂಬಡ್ತಿ ಮತ್ತು ನೇರ ನೇಮಕಾತಿ) ರ ಅನುಪಾತದಲ್ಲಿ ಸಹ ಶಿಕ್ಷಕರ ಹುದ್ದೆಯಿಂದ ಮುಂಬಡ್ತಿ ನೀಡಲು ಕ್ರಮವಹಿಸಲಾಗಿದ್ದು, ಮುಂಬಡ್ತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಸಂಖ್ಯೆ: ಸಕಇ 87 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು